**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿಇ/ವೈ.ಶಾ./ಕೇ.ಮಾ.ಸಂ.ಅ.ಸ.ಪಿ.ವೇ.2022/2022-23

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12.
ದಿನಾಂಕ:-27/07/2022

## ಪತ್ರಿಕಾ ಪ್ರಕಟಣೆ

**ಕೇಂದ್ರ ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ (M.H.R.D)**, ಉನ್ನತ ಶಿಕ್ಷಣ ಇಲಾಖೆ, ಕೇಂದ್ರ ಸರ್ಕಾರ, ನವದೆಹಲಿ ಇವರು, **2022ನೇ ಸಾಲಿನಲ್ಲಿ ನಡೆದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಸಂಯೋಜನೆವಾರು Top 20th Percentile or 80th Percentile**ಗಿಂತ ಹೆಚ್ಚು ಅಂಕಗಳಿಸಿ ತೇರ್ಗಡೆ ಹೊಂದಿದ ಹಾಗೂ **ತಮ್ಮ ವಿದ್ಯಾಭ್ಯಾಸವನ್ನು ಕಡ್ಡಾಯವಾಗಿ ಉನ್ನತ ಶಿಕ್ಷಣದಲ್ಲಿ ಮುಂದುವರಿಸಿರುವಂತಹ(ಕನಿಷ್ಠ 03 ವರ್ಷದ ಪದವಿ ತರಗತಿಗೆ ದಾಖಲಾಗಿರುವ)** ವಿದ್ಯಾರ್ಥಿಗಳಿಂದ **Central Sector Scheme of Scholarship for College and University Students**ಗಳಿಗೆ **online** ಮೂಲಕ ಅರ್ಜಿ ಸಲ್ಲಿಸುವಂತೆ ಸೂಚಿಸಲಾಗಿರುತ್ತಾರೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.in**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, ಈ portalನಲ್ಲಿಯೇ **2022ರ Fresh Batchನ ವಿದ್ಯಾರ್ಥಿಗಳು ಅರ್ಜಿಗಳನ್ನು "online" ಮೂಲಕ ಸಲ್ಲಿಸಬೇಕಿರುತ್ತದೆ.** **(Link for submission of application website:www.scholarship.gov.in =» New User(Register)**. ಪ್ರಸ್ತುತ ಸದರಿ ಪೋರ್ಟಲ್‌ನಲ್ಲಿ ಹೊಸ ಬ್ಯಾಚ್‌ನ ಕಾರ್ಯ ಚಾಲ್ತಿಯಲ್ಲಿದೆ. ಆಸಕ್ತ ಅರ್ಹ ವಿದ್ಯಾರ್ಥಿಗಳು ಸದರಿ ಪೋರ್ಟಲ್‌ನಲ್ಲಿ ಲಭ್ಯವಿರುವ **Guidelines**ನ್ನು ಖಡ್ಡಾಯವಾಗಿ ಓದಿ ಅರ್ಥೈಸಿಕೊಂಡು ಮಾಡಿಕೊಂಡು ಕೂಡಲೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸಿರುವ **ದಿನಾಂಕ:-31-10-2022ರೊಳಗಾಗಿ "Online"** ಮೂಲಕ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

**ಹಾಗೂ 2022ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ** (ಹೊಸ ಹಾಗೂ ನವೀಕರಣಗಳಿಗೆ) ಅರ್ಜಿ ಸಲ್ಲಿಸಲಿಚ್ಛಿಸುವ ಅರ್ಹ ವಿದ್ಯಾರ್ಥಿಗಳು ಕಡ್ಡಾಯವಾಗಿ ಆಧಾರ್ ನೋಂದಣಿ ಸಂಖ್ಯೆಯನ್ನು ಬ್ಯಾಂಕ್ ಖಾತೆಗೆ ಲಿಂಕ್ ಮಾಡಬೇಕಿರುತ್ತದೆ. ಆದಕಾರಣ, ಆಸಕ್ತ ವಿದ್ಯಾರ್ಥಿಗಳು ಆಧಾರ್ ನೊಂದಣಿ ಸಂಖ್ಯೆಯನ್ನು ಕಡ್ಡಾಯವಾಗಿ ಹೊಂದಿರಬೇಕಾಗಿ ಈ ಮೂಲಕ ತಿಳಿಸಿದೆ. ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿದ ಎಲ್ಲಾ ದಾಖಲೆಗಳನ್ನು (ಮೂಲ ದಾಖಲೆಗಳ ಜೊತೆಯಲ್ಲಿ) ಪರಿಶೀಲನೆಗಾಗಿ ತಾವು ಅಧ್ಯಯನ ಮಾಡುತ್ತಿರುವ ಕಾಲೇಜುಗಳ ಪ್ರಾಚಾರ್ಯರುಗಳಿಗೆ ಕೇಂದ್ರ ಸರ್ಕಾರದಿಂದ ನಿಗದಿ ಪಡಿಸುವ ದಿನಾಂಕದೊಳಗಾಗಿ ಸಲ್ಲಿಸುವುದು.

ಪ್ರಾಚಾರ್ಯರುಗಳು, ವಿದ್ಯಾರ್ಥಿಗಳು **"online" ಮೂಲಕ** ಸಲ್ಲಿಸಿರುವ ಅರ್ಜಿಗಳನ್ನು **"online"**ನಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸದರಿ ವಿದ್ಯಾರ್ಥಿಯು ತಮ್ಮ ಕಾಲೇಜಿನಲ್ಲಿ ದಾಖಲಾಗಿ, ವಿದ್ಯಾಭ್ಯಾಸ ಮುಂದುವರಿಸಿರುವ ಬಗ್ಗೆ ಹಾಗೂ ವಿದ್ಯಾರ್ಥಿಯು ಈ ವಿದ್ಯಾರ್ಥಿ ವೇತನದ ಉದ್ದೇಶಕ್ಕಾಗಿ ಖಾತೆ ತೆರೆದಿರುವ ಬ್ಯಾಂಕ್‌ನ ವಿವರಗಳನ್ನು ಪರಿಶೀಲಿಸಿ ಖಚಿತ ಪಡಿಸಿಕೊಂಡು, ಸದರಿ ಮಾಹಿತಿಯನ್ನು **"online" ಮೂಲಕವೇ ಕೇಂದ್ರ ಸರ್ಕಾರದ ವತಿಯಿಂದ ನಿಗದಿ ಪಡಿಸುವ ದಿನಾಂಕ:** 31/10/2022 **ರೊಳಗೆ ಇಲಾಖೆಗೆ ಸಲ್ಲಿಸಲು( Forward ಮಾಡಲು)** ಕೋರಿದೆ. ಯಾವುದೇ ಕಾರಣಕ್ಕೂ ನೈಜ ವಿದ್ಯಾರ್ಥಿಯ ಹೊರತು ಆಯ್ಕೆಯಾಗದ ವಿದ್ಯಾರ್ಥಿಗೆ ವಿದ್ಯಾರ್ಥಿ ವೇತನ ಜಮೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಪ್ರಾಚಾರ್ಯರದ್ದಾಗಿರುತ್ತದೆ. ಈ ಸಂಬಂಧ ಹೆಚ್ಚಿನ ಮಾಹಿತಿಗೆ ಕೇಂದ್ರ ಕಛೇರಿಯ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನದ ಶಾಖೆಯನ್ನು ಸಂಪರ್ಕಿಸಲು ಕೋರಿದೆ. ಪದವಿ ಪೂರ್ವ ಶಿಕ್ಷಣ ಇಲಾಖೆಯ **Website: http:// pue.karnataka.gov.in =» Scholarship =» MHRD Scholarship =» MHRD Scholarship 2022-Fresh batch**ನಿಂದ ಮಾಹಿತಿಯನ್ನು ಪಡೆದುಕೊಳ್ಳಬಹುದು.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ:-

1. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸುವ ಸಲುವಾಗಿ.

**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿಇ/ಶೈ.ಶಾ./MHRD.Sch/Renewals/2022-23

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಕ್ರಾಸ್, ಸಂಪಿಗೆ ರಸ್ತೆ,
ಮಲ್ಲೇಶ್ವರಂ, ಬೆಂಗಳೂರು-12,
ದಿನಾಂಕ:-22/07/2022

**ಪತ್ರಿಕಾ ಪ್ರಕಟಣೆ**

**2018, 2019, 2020 ಹಾಗೂ 2021**ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ **"Direct Benefit Transfer (DBT) Programme"**ನ ಅಡಿಯಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಅವರ **1ನೇ, 2ನೇ, 3ನೇ ಹಾಗೂ 4ನೇ ನವೀಕರಣಕ್ಕೆ "online"** ಮೂಲಕ ಅರ್ಜಿಯನ್ನು ಸಲ್ಲಿಸಬೇಕಾಗಿದೆ. ಈ ಸಂಬಂಧವಾಗಿ ಕೇಂದ್ರ ಸರ್ಕಾರದ ವತಿಯಿಂದ **website:www.scholarships.gov.**ನ **National e-Scholarship Portal**ನಲ್ಲಿ ಹೊಸ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಆದಕಾರಣ, **2022**ನೇ ಸಾಲಿನಲ್ಲಿ ಎಂ.ಹೆಚ್.ಆರ್.ಡಿ. ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳು **ನವೀಕರಣಗಳ** ನಿಮಿತ್ತ ಈ **portal**ನಲ್ಲಿಯೇ ಅರ್ಜಿಗಳನ್ನು **"online"** ಮೂಲಕ ಸಲ್ಲಿಸಬೇಕಿರುತ್ತದೆ. ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಕೂಡಲೇ ಸಂಪರ್ಕಿಸಿ **"online"** ಮೂಲಕ ದಿನಾಂಕ:**31-10-2022ರೊಳಗೆ** ಅರ್ಜಿಯನ್ನು ಸಲ್ಲಿಸುವುದು.

ಇಲಾಖಾ ವೆಬ್‌ಸೈಟ್‌ನಲ್ಲಿಯೂ ಕೂಡ **2018, 2019, 2020 ಹಾಗೂ 2021**ನೇ ಸಾಲಿನಲ್ಲಿ ಆಯ್ಕೆಗೊಂಡಿರುವ ವಿದ್ಯಾರ್ಥಿಗಳಿಗೆ **"online"** ಮೂಲಕ **ನವೀಕರಣಗಳಿಗೆ** ಅರ್ಜಿ ಸಲ್ಲಿಸುವ ಕುರಿತು ಸುತ್ತೋಲೆಯನ್ನು ಅಳವಡಿಸಲಾಗಿದೆ. ವೆಬ್‌ಸೈಟ್ ಸಂಖ್ಯೆ:**http://pue.karnataka.gov.in =>Scholarship=>MHRD Scholarship=> MHRD Scholarship RENEWAL.** ವಿದ್ಯಾರ್ಥಿಗಳು ಈ ವೆಬ್‌ಸೈಟನ್ನು ಸಂಪರ್ಕಿಸಿ ತಮಗೆ ಸಂಬಂಧಪಟ್ಟ ಮಾಹಿತಿಯನ್ನು ಪಡೆದು ದಿನಾಂಕ:**31-10-2022ರೊಳಗೆ Online** ಮೂಲಕ ಅರ್ಜಿಯನ್ನು ಸಲ್ಲಿಸುವುದು. ಪ್ರಥಮ ನವೀಕರಣ ಹಾಗೂ ಇನ್ನುಳಿದ ಮುಂದಿನ ನವೀಕರಣಗಳಿಗೆ ಆಧಾರ್ ಸಂಖ್ಯೆಯನ್ನು ಪಡೆದು ಬ್ಯಾಂಕ್ ಖಾತೆಯೊಂದಿಗೆ ಲಿಂಕ್ ಮಾಡಿರುವುದು. ಪ್ರಾಚಾರ್ಯರುಗಳು / ಸಂಸ್ಥೆಯವರು ಅರ್ಹ ವಿದ್ಯಾರ್ಥಿಗಳ ಅರ್ಜಿಗಳನ್ನು ಪರಿಶೀಲಿಸಿ ಅನುಮೋದಿಸುವ / ತಿರಸ್ಕರಿಸುವ ಕಾರ್ಯವನ್ನು ತಮ್ಮ ಹಂತದಲ್ಲಿಯೇ ನಿರ್ವಹಿಸುವುದು.

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ:-

1. ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ, ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸುವ ಸಲುವಾಗಿ.